ನಿಯಮ-72ರ
ಕ್ರಮಸಂಖ್ಯೆ-67

# ಕರ್ನಾಟಕ ಸರ್ಕಾರ

ಸಂಖ್ಯೆ: ಸಕಇ 447 ಎಸ್‌ಡಿಸಿ 2021

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ
ಬೆಂಗಳೂರು. ದಿನಾಂಕ:15-11-2021

ಇವರಿಂದ:-

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಮಾಜ ಕಲ್ಯಾಣ ಇಲಾಖೆ,
ಬೆಂಗಳೂರು.

ಇವರಿಗೆ:-

ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು,
ವಿಧಾನಸೌಧ,
ಬೆಂಗಳೂರು.

ಮಾನ್ಯರೇ,

**ವಿಷಯ:-** ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ.ಕೆ.ಹರಿಪ್ರಸಾದ್ ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.

**ಉಲೇಖ:** ಸೂಚನೆ ಸಂಖ್ಯೆ: ಕವಿಪ/ಪ್ರ.ಶಾ/67/144ನೇಅ/ನಿ-72/2021. ದಿನಾಂಕ:15/17-09-2021

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ.ಕೆ.ಹರಿಪ್ರಸಾದ್ ಇವರು ನಿಯಮ 72 ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರದ 15 ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ, ಮುಂದಿನ ಕ್ರಮಕ್ಕಾಗಿ ತಮಗೆ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

15/11/2021

(ಪಿ.ಎನ್.ನಾಗರಾಜ್)
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಮಾಜ ಕಲ್ಯಾಣ ಇಲಾಖೆ.

**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 334 |
| ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 03-02-2021. (ಕಂದಾಯ ಇಲಾಖೆಯಿಂದ ವರ್ಗಾವಣೆಯಾದ ಪ್ರಶ್ನೆ) |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| 1. | ಭೂ-ಪರಿವರ್ತನೆಯಾದ ಜಾಗವನ್ನು ನಮೂನೆ-11 ಬಿ ಮೂಲಕ ಖರೀದಿಸಿದ್ದರೂ ನಮೂನೆ-9 ಹಾಗೂ 11-ಎ ನೀಡುವುದನ್ನು ರಾಜ್ಯದಲ್ಲಿ ಸ್ಥಗಿತಗೊಳಿಸಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ-9 ಮತ್ತು 11ಎ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ-9 ಮತ್ತು 11ಎ ವಿತರಿಸುತ್ತಾರೆ.<br><br>ಕ್ರಮಬದ್ಧವಲ್ಲದ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ |
| 2. | ಬಂದಿದ್ದಲ್ಲಿ, ನಿಯಮಾವಳಿಯಂತೆ ಸ್ಟ್ಯಾಂಪ್ ಶುಲ್ಕ ಇತ್ಯಾದಿಗಳನ್ನು ಭೂ-ಪರಿವರ್ತಿತ ಜಾಗವನ್ನು 11-ಬಿ ಮೂಲಕ ಖರೀದಿಸಿದವರಿಗೆ ನಮೂನೆ-9 ಹಾಗೂ 11-ಎ ನೀಡಲು ಯಾವ ಕ್ರಮ ವಹಿಸಲಾಗಿದೆ. | ನಮೂನೆ 11ಬಿ ಯನ್ನು ಪಡೆಯಲು ಆಸ್ತಿಯ ಮಾಲೀಕರು ಆಸ್ತಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ 11ಬಿ ವಿತರಿಸುತ್ತಾರೆ.<br><br>ಕ್ರಮಬದ್ಧವಲ್ಲದ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ-11ಬಿ |
| 3. | ಇಲ್ಲವಾದಲ್ಲಿ ನಮೂನೆ-9 ಹಾಗೂ 11-ಎ ನ್ನು ನೀಡಲು ಯಾವಾಗ ಕ್ರಮ ವಹಿಸಲಾಗುವುದು? | ಪಡೆದಿರುವ ಆಸ್ತಿಯ ಮಾಲೀಕರು ನಮೂನೆ-9 ಮತ್ತು 11ಎ ಯನ್ನು ಪಡೆಯಲು ಆಸ್ತಿಗೆ ಸಂಬಂಧಿಸಿದ ಭೂ ಪರಿವರ್ತನೆ ಆದೇಶ ಮತ್ತು ಸಕ್ಷಮ ಪ್ರಾಧಿಕಾರದಿಂದ ಅಂದರೆ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ನಗರಾಭಿವೃದ್ಧಿ ಪ್ರಾಧಿಕಾರ / ಯೋಜನಾ ಪ್ರಾಧಿಕಾರಿಗಳಿಂದ ಅನುಮೋದನೆ ಪಡೆದ ವಿನ್ಯಾಸ ನಕ್ಷೆ (ಲೇಔಟ್ ಪ್ಲಾನ್) ಒದಗಿಸಿದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ನಮೂನೆ-9 ಮತ್ತು 11ಎ ವಿತರಿಸುತ್ತಾರೆ. |

ಸಂ. ಗ್ರಾಅಪ 65 ಗ್ರಾಪಂಅ 2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು

## ಶ್ರೀ ಬಿ.ಕೆ.ಹರಿಪ್ರಸಾದ್ ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು ಇವರು ನಿಯಮ 72 ರಡಿಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

### ಸೂಚನೆ:-

1973-74ನೇ ಸಾಲಿನಲ್ಲಿ ಆಗಿನ ಪೌರಾಡಳಿತ ಸಚಿವರಾಗಿದ್ದ ದಿವಂಗತ ಸನ್ಮಾನ್ಯ ಶ್ರೀ.ಬಸವಲಿಂಗಪ್ಪನವರು ರಾಜ್ಯದಲ್ಲಿ ಮೊಟ್ಟಮೊದಲಿಗೆ ದೇಶಕ್ಕೆ ಮಾದರಿಯಾದಂತಹ ಒಂದು ಕ್ರಾಂತಿಕಾರಕ ಕಾನೂನನ್ನು ಜಾರಿಗೆ ತಂದು, ತಲೆಯ ಮೇಲೆ ಮಲ ಹೊರುವುದನ್ನು ಸಂಪೂರ್ಣವಾಗಿ ನಿಷೇಧ ಮಾಡಿದ್ದರು.

ಮುಂದುವರೆದಂತೆ 2013 ನೇ ಸಾಲಿನಲ್ಲಿ 'The Prohibition of Employment as Manual Scavengers and their Rehabilitation Act, 2013'ರಂದು ಈ ಮಲಹೊರುವ ಪದ್ಧತಿಯನ್ನು ಸಂಪೂರ್ಣವಾಗಿ ನಿಷೇಧಿಸಿದ್ದರೂ, ಅದನ್ನು ಸರ್ಕಾರವು ಸಂಪೂರ್ಣವಾಗಿ ಜಾರಿಗೊಳಸದೆ ಈಗಲೂ ಸಹಾ ರಾಜ್ಯದ ಅನೇಕ ಜಿಲ್ಲೆಗಳಲ್ಲಿ ಹಸ್ತಚಾಲಿತ ಸ್ಕ್ಯಾವೆಂಜಿಂಗ್ ಪದ್ಧತಿಯು ಚಾಲ್ತಿಯಲ್ಲಿರುವುದು ಅತ್ಯಂತ ಶೋಚನೀಯ ಮತ್ತು ಖಂಡನೀಯ ಸಂಗತಿಯಾಗಿರುವ ಈ ವಿಚಾರವು ಸಾರ್ವಜನಿಕವಾಗಿ ಅತ್ಯಂತ ಮಹತ್ವವಾಗಿರುವ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

### ಉತ್ತರ:-

ಭಾರತ ಸರ್ಕಾರವು 2013ರಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಕಾಯ್ದೆ ಅಧಿನಿಯಮ 2013ರ ಕಾಯ್ದೆ ಹಾಗೂ ನಿಯಮಗಳನ್ನು ರೂಪಿಸಿ ಜಾರಿಗೆ ತರಲಾಗಿದೆ. ಅದರಂತೆ ರಾಜ್ಯ ಸರ್ಕಾರದಿಂದ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

- ಎಂ.ಎಸ್ ಕಾಯ್ದೆ 2013ನ್ನು ರಾಜ್ಯದಲ್ಲಿ ನಗರ ಮತ್ತು ಗ್ರಾಮೀಣ ಭಾಗದಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್‌ನಲ್ಲಿ ತೊಡಗಿರುವವರನ್ನು ಕಾಯ್ದೆಯ ನಿಯಮಗಳಾನುಸಾರ 5080 ಜನರನ್ನು ಗುರುತಿಸಲಾಗಿರುತ್ತದೆ. ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಪುನರ್ವಸತಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಗಿರುತ್ತದೆ. ಒಂದು ಬಾರಿ ನಗದು ಸಹಾಯಧನವಾಗಿ ರೂ.40,000 ಗಳನ್ನು ಭಾರತ ಸರ್ಕಾರದಿಂದ ನೀಡಲಾಗುತ್ತಿದೆ. ರಾಜ್ಯ ಸರ್ಕಾರದ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದಿಂದ ಸಾಲಸಹಾಯಧನ ನೀಡಲಾಗುತ್ತಿದೆ.
- ಮ್ಯಾನ್‌ಹೋಲ್ ಸ್ವಚ್ಛಗೊಳಸುವಾಗ ಮೃತಪಟ್ಟಿದ್ದಲ್ಲಿ ಸಂಬಂಧಿಸಿದ ಗುತ್ತಿಗೆದಾರರು/ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮ್ಮೆ ದಾಖಲಿಸಲಾಗುತ್ತಿದೆ. ಮೃತಪಟ್ಟ ಕುಟುಂಬದ ಅವಲಂಬಿತರಿಗೆ ರೂ.10,00,000/- ಪರಿಹಾರಧನವನ್ನು ನೀಡಲಾಗುತ್ತಿದೆ. 1993 ರಿಂದ ಈವರೆಗೂ 88 ಕುಟುಂಬಗಳಿಗೆ ಪರಿಹಾರಧನ ನೀಡಲಾಗಿದೆ.
- ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯನ್ನು ನಿರ್ಮೂಲನೆ ಮಾಡಲು ರಾಜ್ಯ ಸರ್ಕಾರವು "State Action Plan for Elimination of Manual Cleaning of Sewers and Septic tanks"ಎಂಬ ಕ್ರಿಯಾಯೋಜನೆ ರೂಪಿಸಿ ಸಂಬಂಧಪಟ್ಟ ಇಲಾಖೆಗಳಿಗೆ ಕಳುಹಿಸಲಾಗಿದೆ.
- ಮ್ಯಾನ್‌ಹೋಲ್ ಸೆಪ್ಟಿಕ್ ಟ್ಯಾಂಕ್ ಹಾಗೂ ತೆರೆದ ಚರಂಡಿ ಗಟಾರಗಳನ್ನು ಸ್ವಚ್ಛಗೊಳಸಲು ಆಧುನಿಕ ತಂತ್ರಜ್ಞಾನದ ಯಂತ್ರೋಪಕರಣಗಳನ್ನು ಉಪಯೋಗಿಸಲಾಗುತ್ತಿದೆ. ಈವರೆಗೂ

ನಗರಾಭಿವೃದ್ಧಿ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಈ ಕೆಳಗಿನ ಆಧುನಿಕ ತಂತ್ರಜ್ಞಾನದ ಯಂತ್ರೋಪಕರಣಗಳನ್ನು ಖರೀದಿಸಿ ಉಪಯೋಗಿಸಲಾಗುತ್ತಿದೆ.

1. ಸಕ್ಕಿಂಗ್ ಮಷಿನ್ -177,
2. ಜಟ್ಟಿಂಗ್ ಮಷಿನ್ -255,
3. ಡೀಸಾಲ್ಟಿಂಗ್-50,
4. ರಾಡರಿಂಗ್ ಯಂತ್ರ-28
5. ಸಕ್ಕಿಂಗ್ ಕಮ್ ಜಟ್ಟಿಂಗ್ ಮಷಿನ್-132
6. ಇತರೆ ಸ್ವಚ್ಛಗೊಳಿಸುವ 13 ಯಂತ್ರಗಳನ್ನು

- ರಾಜ್ಯದಲ್ಲಿ ಈ ಹಿಂದೆ ಇದ್ದ ಒಟ್ಟು 30,341 ಅನೈರ್ಮಲ್ಯ ಶೌಚಾಲಯಗಳನ್ನು ತೆರವುಗೊಳಿಸಿ ನೈರ್ಮಲ್ಯ ಶೌಚಾಲಯಗಳನ್ನಾಗಿ ಪರಿವರ್ತಿಸಲಾಗಿದೆ.

- ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗ ಮತ್ತು ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ಇವರುಗಳು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ಬಗ್ಗೆ ಕಾನೂನಿನ ಕುರಿತು ಅರಿವು ಮೂಡಿಸುವ ಮತ್ತು ಪುನರ್ವಸತಿ ಕಲ್ಪಿಸುವ ದಿಸೆಯಲ್ಲಿ ಕಾರ್ಯನಿರ್ವಹಿಸುತ್ತಿವೆ.

- ರಾಜ್ಯ ಮಟ್ಟದಲ್ಲಿ ಸಮಾಜ ಕಲ್ಯಾಣ ಸಚಿವರ ಅಧ್ಯಕ್ಷತೆಯಲ್ಲಿ ಸಫಾಯಿ ಕರ್ಮಚಾರಿಗಳ ಸಮುದಾಯದ ಪ್ರತಿನಿಧಿಗಳನ್ನು ಹಾಗು ಅನುಷ್ಠಾನ ಇಲಾಖೆಗಳನ್ನು ಒಳಗೊಂಡಂತೆ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ಪ್ರತಿ 6 ತಿಂಗಳಗೊಮ್ಮೆ ಸಭೆ ಸೇರಿ, ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯನ್ನು ನಿರ್ಮೂಲನೆಗೊಳಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ.

**ಕಡತ ಸಂಖ್ಯೆ: ಸಕಇ 447 ಎಸ್‌ಡಿಸಿ 2021**

**(ಕೋಟ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು